ರಾಜ್ಯದಲ್ಲಿ ಮಂಡಲ ಗ್ರಂಥಾಲಯಗಳಲ್ಲಿರುವ ಖಾಲಿ ಹುದ್ದೆಗಳ ಭರ್ತಿ

496(858) -ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ವಯಸ್ಕರ ಶಿಕ್ಷಣ, ಗ್ರಂಥಾಲಯ, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಮಂಡಳ ಕೇಂದ್ರ ಗ್ರಂಥಾಲಯಗಳು ಇರುತ್ತವೆ; ಅವುಗಳಲ್ಲಿ ಎಷ್ಟು ಗ್ರಂಥಾಲಯದಲ್ಲಿ ಮೇಲ್ವಿಚಾರಕರ ಹುದ್ದೆಗಳು ಖಾಲಿ ಇರುತ್ತವೆ; ಅವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಬಾಬುರಾವ್ ಚವ್ಹಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯ, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ರಾಜ್ಯದಲ್ಲಿ 2751 ಗ್ರಾಮ ಪಂಚಾಯತ್ ಗ್ರಂಥಾಲಯಗಳು ಇರುತ್ತವೆ. ಅವುಗಳಲ್ಲಿ 42 ಗ್ರಂಥಾಲಯಗಳಲ್ಲಿ ಮೇಲ್ವಿಚಾರಕರ ಹುದ್ದೆಗಳು ಖಾಲಿ ಇರುತ್ತದೆ. ಸ್ಥಳೀಯವಾಗಿ, ಮಂಡಳ ಕೇಂದ್ರಗಳಿಂದ ಅರ್ಹ ಅಭ್ಯರ್ಥಿಯ ತಯ್ಯೆ ಪಟ್ಟಿಯನ್ನು ಪಡೆದು, ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ವಹಿಸಲಾಗುತ್ತಿದೆ.

ರಾಜ್ಯದಲ್ಲಿ ಸರ್ಕಾರಿ ಕನ್ನಡ ಶಾಲೆಗಳಲ್ಲಿ ಮಧ್ಯಾಹ್ನದ ಊಟ

497(859) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : (ಪ್ರಾಥಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಕನ್ನಡ ಬಾಲಕರ ಶಾಲೆಗಳಲ್ಲಿ ಮಧ್ಯಾಹ್ನದ ಊಟಕ್ಕಾಗಿ ಎಷ್ಟು ಹಣವನ್ನು ತೆಗೆದಿರಿಸಲಾಗಿದೆ?

ಆ) ಈ ಯೋಜನೆ ಈಗ ಯಾವ ಯಾವ ತಾಲ್ಲೂಕುಗಳಲ್ಲಿ ಪ್ರಾರಂಭವಾಗಿರುತ್ತದೆ?

ಇ) ಪೂರ್ವ ಸಿದ್ಧತೆ ಮಾಡದೇ ಇರುವುದರಿಂದ ಈ ಯೋಜನೆ ನಿಷ್ಕ್ರಿಯವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಖಾಸಗಿ ಕನ್ನಡ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಈ ಯೋಜನೆಯಿಂದ ಅನ್ಯಾಯವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ವಿದ್ಯಾರ್ಥಿಗಳಲ್ಲಿ ತಾರತಮ್ಯವನ್ನು ಹೋಗಲಾಡಿಸುವ ದೃಷ್ಟಿಯಿಂದ ಖಾಸಗಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಈ ಯೋಜನೆಯನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೆ?

ಪ್ರೊ ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಕನ್ನಡ ಬಾಲಕರ ಶಾಲೆಗೆಂದು ಮಧ್ಯಾಹ್ನದ ಊಟಕ್ಕಾಗಿ ಪ್ರತ್ಯೇಕ ಹಣ ಕಾಯ್ದಿರಿಸಿರುವುದಿಲ್ಲ. ಬದಲಾಗಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾಗಿರುವ ಎಲ್ಲಾ